**Akashvani : Bangalore**
**Regional Bulletin In Kannada**
**11.09.2025 : 14.30hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**11.09.2025 : 14.30hrs**
*********

**ಮುಖ್ಯಾಂಶಗಳು**

- ಮುಖ್ಯಮಂತ್ರಿ ನೇತೃತ್ವದಲ್ಲಿ ಸಚಿವ ಸಂಪುಟ ಸಭೆ; ಕೃಷ್ಣಾ ಮೇಲ್ದಂಡೆ ಯೋಜನೆ ಕುರಿತು ಮಹತ್ವದ ನಿರ್ಧಾರ ಸಾಧ್ಯತೆ
- ರಾಜ್ಯದ ವಿವಿಧೆಡೆ ಅರಣ್ಯ ಹುತಾತ್ಮರ ದಿನಾಚರಣೆ; ಪರಿಸರ ಸಂರಕ್ಷಣೆಗೆ ಕರೆ
- ಬೆಂಗಳೂರಿನಲ್ಲಿಂದು ಕಾಮನ್‌ವೆಲ್ತ್ ಸಂಸದೀಯ ಸಂಘದ ೧೧ನೇ ಸಮ್ಮೇಳನ
- ವಿಧಾನಪರಿಷತ್‌ಗೆ ನಾಮನಿರ್ದೇಶನಗೊಂಡ ನೂತನ ಶಾಸಕರಿಗೆ ಪ್ರಮಾಣವಚನ ಬೋಧಿಸಿದ ಸಭಾಪತಿ ಬಸವರಾಜ ಹೊರಟ್ಟಿ

**********

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಬೆಂಗಳೂರಿನಲ್ಲಿಂದು ಸಚಿವ ಸಂಪುಟ ಸಭೆ ನಡೆಯುತ್ತಿದ್ದು, ರಾಜ್ಯ ಅಭಿವೃದ್ಧಿಗೆ ಸಂಬಂಧಿಸಿದಂತೆ ಹಲವು ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳುವ ಸಾಧ್ಯತೆಯಿದೆ. ಪ್ರಮುಖವಾಗಿ ಕೃಷ್ಣಾ ಮೇಲ್ದಂಡೆ ಯೋಜನೆ ಹಂತರ-೩ರ ಅಡಿ ಸ್ವಾಧೀನಕ್ಕೊಳಪಡುವ ಭೂಮಿಗಳಿಗೆ ದರ ನಿಗದಿ ಕುರಿತಂತೆ ತೀರ್ಮಾನ ತೆಗೆದುಕೊಳ್ಳಲು ನಿರ್ಧರಿಸಲಾಗಿದೆ.

**********

ಮಾನವರ ಅಳಿವು ಉಳಿವು ಅರಣ್ಯದ ಉಳಿವಿನ ಮೇಲೆ ಅವಲಂಬಿತವಾಗಿದೆ. ಹೀಗಾಗಿ ಅರಣ್ಯ ಹುತಾತ್ಮರನ್ನು ಸ್ಮರಿಸುವುದು ಪ್ರತಿಯೊಬ್ಬರ ಕರ್ತವ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಅರಣ್ಯ ಇಲಾಖೆ ಆಯೋಜಿಸಿದ್ದ ರಾಷ್ಟೀಯ ಅರಣ್ಯ ಹುತಾತ್ಮರ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಹಸಿರಿನ ಹೊದಿಕೆ ಹೆಚ್ಚಾದರೆ ಅರಣ್ಯವೂ ಹೆಚ್ಚುತ್ತದೆ. ಅರಣ್ಯ

ಸಂಪತ್ತೂ ಹೆಚ್ಚುತ್ತದೆ. ಕಾಡು ಪ್ರಾಣಿ ಸಂಪತ್ತಿನಲ್ಲಿ ರಾಜ್ಯ ಪ್ರಥಮ ಸ್ಥಾನದಲ್ಲಿದೆ. ಕಾಡು ಪ್ರಾಣಿಗಳಿಗೆ ಅಗತ್ಯವಾದ ಆಹಾರ, ನೀರು ಕಾಡಿನಲ್ಲೇ ಸಾಕಷ್ಟು ಸಿಗುವಂತೆ ಮಾಡಿದರೆ ಅರಣ್ಯ ಮಾನವ ಸಂಘರ್ಷವನ್ನು ತಡೆಗಟ್ಟಬಹುದು ಎಂದರು.

****ಧ್ವನಿ**** ಮುಖ್ಯಮಂತ್ರಿ ಸಿದ್ದರಾಮಯ್ಯ

ಕಾಡು ಪ್ರಾಣಿಗಳ ಮತ್ತು ಮಾನವರ ಸಂಘರ್ಷ ತಪ್ಪಿಸಲು ರೈಲ್ವೇ ಬ್ಯಾರಿಕೇಡ್‌ಗಳನ್ನು ನಿರ್ಮಿಸಲು ಮತ್ತು ಇವುಗಳ ನಿರ್ವಹಣೆಯನ್ನು ಅಚ್ಚುಕಟ್ಟಾಗಿ ನಿರ್ಮಿಸಲು ಸರ್ಕಾರ ಸ್ಪಷ್ಟ ಸೂಚನೆ ನೀಡಿದೆ ಎಂದು ತಿಳಿಸಿದರು. ಅರಣ್ಯ ಸಚಿವ ಈಶ್ವರ್ ಖಂಡ್ರೆ ಮತ್ತು ಹಿರಿಯ ಅಧಿಕಾರಿಗಳು ಸಮಾರಂಭದಲ್ಲಿ ಉಪಸ್ಥಿತರಿದ್ದರು.

**********

ರಾಜ್ಯದ ವಿವಿಧೆಡೆ ಇಂದು ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿತ್ತು. ಹಾಸನದ ಉಪ ಅರಣ್ಯ ಸಂರಕ್ಷಣಾಧಿಕಾರಿ ಕಚೇರಿ ಆವರಣದಲ್ಲಿಂದು ರಾಷ್ಟ್ರೀಯ ಅರಣ್ಯ ಇಲಾಖೆಯಲ್ಲಿ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಹೇಮಾವತಿ, ಹುತಾತ್ಮ ಅಧಿಕಾರಿ, ಸಿಬ್ಬಂದಿ ಪುಷ್ಪನಮನ ಸಲ್ಲಿಸಿ ಮಾತನಾಡಿದರು. ಧಾರವಾಡದ ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರಾದ ಬಿ.ಎಸ್.ಭಾರತಿ, ಕರ್ನಾಟಕ ಅರಣ್ಯ ಇಲಾಖೆ ಧಾರವಾಡ ವೃತ್ತದ ಧಾರವಾಡ ಅರಣ್ಯ ಸಂಕೀರ್ಣ ಆವರಣದಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ, ದೇಶದ ಅಭಿವೃದ್ಧಿಗೆ ಅಗತ್ಯವಿರುವ ನೈಸರ್ಗಿಕ ಸಂಪನ್ಮೂಲಗಳು ಮತ್ತು ದೇಶದ ನಾಗರಿಕರಿಗೆ ಉತ್ತಮ ಆರೋಗ್ಯ, ಜೀವನ ಲಭಿಸಲು ಅರಣ್ಯ ಸಂಪತ್ತು ಮುಖ್ಯವಾಗಿದೆ ಎಂದು ಹೇಳಿದ್ದಾರೆ.

**********

ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಕಾಮನ್‌ವೆಲ್ತ್ ಸಂಸದೀಯ ಸಂಘದ ೧೧ನೇ ಸಮ್ಮೇಳನವನ್ನು ಬೆಂಗಳೂರಿನಲ್ಲಿ ಇಂದು ಸಂಜೆ ಉದ್ಘಾಟಿಸಲಿದ್ದಾರೆ. ಈ ಸಮ್ಮೇಳನದ ಕಾರ್ಯಸೂಚಿ “ಶಾಸಕಾಂಗದ ಸದನಗಳಲ್ಲಿ ಚರ್ಚೆಗಳು ಮತ್ತು ಮಾತುಕತೆಗಳು: ಜನರ ನಂಬಿಕೆ

ಮೂಡಿಸುವುದು, ಜನರ ಆಕಾಂಕ್ಷೆಗಳನ್ನು ಪೂರೈಸುವುದು” ಎಂಬುದಾಗಿದೆ. ಉದ್ಘಾಟನಾ ಸಮಾರಂಭದಲ್ಲಿ ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯಸಭೆಯ ಉಪಸಭಾಪತಿ ಹರಿವಂಶ್ ಮತ್ತಿತರರು ಗಣ್ಯರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ವಿಧಾನಸಭೆಯ ಸ್ಪೀಕರ್ ಯು.ಟಿ. ಖಾದರ್ ಸ್ವಾಗತ ಭಾಷಣ ಮಾಡಲಿದ್ದಾರೆ.ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ನಡೆಯಲಿರುವ ಉದ್ಘಾಟನಾ ಸಮಾರಂಭದಲ್ಲಿ ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳ ಶಾಸನ ಸಭೆಗಳ ಅಧ್ಯಕ್ಷರು ಹಾಗೂ ಪೀಠಾಧ್ಯಕ್ಷರು ಭಾಗವಹಿಸಲಿದ್ದಾರೆ. ಈ ಕುರಿತು ವಿಧಾನಸಭೆಯ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ ಹೆಚ್ಚಿನ ಮಾಹಿತಿ ನೀಡಿದ್ದಾರೆ.

ಧ್ವನಿ : ಎಂ.ಕೆ. ವಿಶಾಲಾಕ್ಷಿ (೩೦ ಸೆಕೆಂಡ್‌ಗಳು)

**********

ವಿಧಾನಪರಿಷತ್‌ಗೆ ನೂತನವಾಗಿ ನಾಮನಿರ್ದೇಶನಗೊಂಡಿರುವ ಆರತಿಕೃಷ್ಣ, ಕೆ. ಶಿವಕುಮಾರ್, ರಮೇಶ್‌ಬಾಬು ಮತ್ತು ಎಫ್.ಎಚ್ ಜಕ್ಕಪ್ಪನವರ್, ಇಂದು ಪ್ರಮಾಣವಚನ ಸ್ವೀಕರಿಸಿದರು. ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಪ್ರಮಾಣವಚನ ಬೋಧಿಸಿದರು. ಕಾರ್ಯಕ್ರಮದಲ್ಲಿ, ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಗೃಹ ಸಚಿವ ಡಾ. ಜಿ.ಪರಮೇಶ್ವರ್, ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್, ಪಶುಸಂಗೋಪನೆ ಸಚಿವ ವೆಂಕಟೇಶ್, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್. ಭೋಸರಾಜು, ವಸತಿ ಸಚಿವ ಜಮೀರ್ ಅಹಮದ್ ಖಾನ್, ಸೇರಿದಂತೆ ಇತರೆ ಗಣ್ಯರು ಉಪಸ್ಥಿತರಿದ್ದರು.

**********

ಮಂಡ್ಯ ಜಿಲ್ಲೆಯ ಮದ್ದೂರು ಸಹಜ ಸ್ಥಿತಿಗೆ ಮರಳಿದೆ. ಕಳೆದ ಮೂರು ದಿನಗಳಿಂದ ಇದ್ದ ವಾತಾವರಣ ತಿಳಿಗೊಂಡಿದ್ದು, ನಿಷೇಧಾಜ್ಞೆ ತೆರವುಗೊಳಿಸಲಾಗಿದೆ. ಜನಜೀವನ ಎಂದಿನಂತಿದ್ದು, ಕೆಲವು ಕಡೆ ಪೊಲೀಸರನ್ನು ನಿಯೋಜಿಸಲಾಗಿದೆ.

**********

ಸಾಕ್ಷರತೆಯಿಂದ ಶೈಕ್ಷಣಿಕ, ಸಾಮಾಜಿಕ ಮತ್ತು ಆರ್ಥಿಕವಾಗಿ ಸ್ವತಂತ್ರವಾದ ನಿರ್ಧಾರಗಳನ್ನು ಕೈಗೊಳ್ಳಬಹುದು ಎಂದು ದಾವಣಗೆರೆ ಜಿಲ್ಲಾ ಶಿಕ್ಷಣ ತರಬೇತಿ ಸಂಸ್ಥೆ ಪ್ರಾಂಶುಪಾಲರಾದ ಗೀತಾ ಹೇಳಿದ್ದಾರೆ. ದಾವಣಗೆರೆ ಮಹಾನಗರ ಪಾಲಿಕೆಯಲ್ಲಿಂದು ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಸಾಕ್ಷರತಾ ದಿನಾಚರಣೆಯಲ್ಲಿ ನವ ಸಾಕ್ಷರ ಪೌರ ಕಾರ್ಮಿಕರಿಗೆ ಪ್ರಮಾಣ ಪತ್ರಗಳನ್ನು ವಿತರಿಸಿ ಅವರು ಮಾತನಾಡಿದರು.

**********

ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ, ಚಿಕ್ಕಬಳ್ಳಾಪುರ ಇವರು ವಿಶ್ವ ಪ್ರಥಮ ಚಿಕಿತ್ಸಾ ದಿನದ ಅಂಗವಾಗಿ ಪ್ರಥಮ ಚಿಕಿತ್ಸಾ ತರಬೇತಿ ಹಾಗೂ ಕ್ಯಾನ್ಸರ್ ಜಾಗೃತಿ ಕಾರ್ಯಕ್ರಮವನ್ನು ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ಇದೇ ೧೩ ರಂದು ಹಮ್ಮಿಕೊಂಡಿದ್ದಾರೆ. ಕಾರವಾರ ಮೆಡಿಕಲ್ ಸೈನ್ಸ್ ಸಂಸ್ಥೆಯ ಸಮುದಾಯ ವೈದ್ಯಕೀಯ ವಿಭಾಗದ ಮುಖ್ಯಸ್ಥ ಮತ್ತು ಪ್ರಾಧ್ಯಾಪಕ ಡಾ.ಕೆ.ಹೇಮಗಿರಿ, ಪ್ರಥಮ ಚಿಕಿತ್ಸಾ ತರಬೇತಿ ನೀಡಲಿದ್ದಾರೆ. ಮುದ್ದೇನಹಳ್ಳಿ ಮಧುಸೂದನಸಾಯಿ ವೈದ್ಯಕೀಯ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ಸ್ತ್ರೀರೋಗ ತಜ್ಞೆ ಡಾ. ತೇಜಸ್ವಿನಿ ಕ್ಯಾನ್ಸರ್ ಕುರಿತು ಜಾಗೃತಿ ಮೂಡಿಸಲಿದ್ದಾರೆ.

**********

ನೂತನ ವಿಜ್ಞಾನಿಗಳಾಗಿ ಆಯ್ಕೆಯಾದವರು ಕೃಷಿ ಮತ್ತು ಕೃಷಿ ಸಂಬಂಧಿಸಿದ ಇತರೆ ಚಟುವಟಿಕೆಗಳಲ್ಲಿ ಹೊಸ ಸಂಶೋಧನಾ ಹಾಗೂ ಆವಿಷ್ಕಾರ ಕಾರ್ಯಗಳನ್ನು ಕೈಗೊಳ್ಳುವ ಮೂಲಕ ವೃತ್ತಿ ಧರ್ಮವನ್ನು ಪಾಲಿಸಬೇಕು ಎಂದು ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ.ಶಿವಾನಂದ ಹೊಂಗಲ್ ತಿಳಿಸಿದ್ದಾರೆ. ಕೋಲಾರ ತಾಲ್ಲೂಕಿನ ಕೋಟಿಗಾನಹಳ್ಳಿ ಗ್ರಾಮದಲ್ಲಿ ಹೈದರಾಬಾದ್ ಐಸಿಎಆರ್ ಸಂಸ್ಥೆ ಹಾಗೂ ಕೃಷಿ ವಿಜ್ಞಾನ ಕೇಂದ್ರದ ವತಿಯಿಂದ ಭಾರತೀಯ ಕೃಷಿ ಸಂಶೋಧನಾ ಸೇವೆಗೆ ಆಯ್ಕೆಯಾಗಿರುವ ನೂತನ ಯುವ ವಿಜ್ಞಾನಿಗಳಿಗೆ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಪರಿಕಲ್ಪನೆ ಬಗ್ಗೆ ಅರಿವು ಮೂಡಿಸಲು ಆಯೋಜಿಸಿದ್ದ ಕ್ಷೇತ್ರ ಅನುಭವ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

**********

ದಾವಣಗೆರೆ ಜಿಲ್ಲೆಯ ೨೫ ನ್ಯಾಯಾಲಯಗಳಲ್ಲಿ ಇದೇ ೧೩ ರಂದು ಏರ್ಪಡಿಸಿರುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ರಾಜೀಯಾಗಬಹುದಾದ ೧೦ ಸಾವಿರಕ್ಕೂ ಅಧಿಕ ಪ್ರಕರಣಗಳನ್ನು ಇತ್ಯರ್ಥಪಡಿಸುವ ಗುರಿ ಹೊಂದಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಡಿ. ಕೆ.ವೇಲಾ ತಿಳಿಸಿದ್ದಾರೆ. ಜಿಲ್ಲೆಯ ೨೫ ನ್ಯಾಯಾಲಯಗಳಲ್ಲಿ ೪೨, ಸಾವಿರದ ೭೦೧ ಪ್ರಕರಣಗಳು ವಿಚಾರಣೆಗೆ ಬಾಕಿ ಇದ್ದು, ಈ ಪೈಕಿ ೧೦ ಸಾವಿರಕ್ಕೂ ಅಧಿಕ ಪ್ರಕರಣಗಳನ್ನು ಇತ್ಯರ್ಥಪಡಿಸುವ ಗುರಿ ಹೊಂದಲಾಗಿದೆ ಎಂದರು.

**********

ಯುವ ಜನತೆ ಎಚ್.ಐ.ವಿ ಬಗ್ಗೆ ಮಾಹಿತಿ ತಿಳಿದಿರಬೇಕು ಮತ್ತು ಸದಾ ಜಾಗೃತರಾಗಿರಬೇಕು ಎಂದು ಉತ್ತರಕನ್ನಡ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ದಿಲೀಷ್ ಶಶಿ ಹೇಳಿದರು. ಕಾರವಾರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್‌ಷನ್ ಸೊಸೈಟಿ ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವುಗಳ ಸಂಯುಕ್ತ ಆಶ್ರಯದಲ್ಲಿ ೧೭ ರಿಂದ ೨೫ ವರ್ಷದೊಳಗಿನ ವಿದ್ಯಾರ್ಥಿಗಳಿಗೆ ನಡೆದ ಜಿಲ್ಲಾ ಮಟ್ಟದ ಮ್ಯಾರಥಾನ್ ಓಟಕ್ಕೆ ಚಾಲನೆ ನೀಡಿದರು.

**********

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಇದೇ ೨೨ ರಿಂದ ಅಕ್ಟೋಬರ್ ೭ರವರೆಗೆ ಕೈಗೊಳ್ಳುತ್ತಿದ್ದು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸಮೀಕ್ಷೆ ಕಾರ್ಯ ಯಶಸ್ವಿಯಾಗಿ ನಡೆಸಲು ಜಿಲ್ಲಾಡಳಿತದಿಂದ ಸಕಲ ಸಿದ್ಧತೆ ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಎ.ಬಿ.ಬಸವರಾಜು ತಿಳಿಸಿದ್ದಾರೆ. ಜಿಲ್ಲೆಯಲ್ಲಿ ೩ ಲಕ್ಷದ ೭ಲಸಾವಿರ ಕುಟುಂಬಗಳ ಸಮೀಕ್ಷೆ ನಡೆಯಲಿದ್ದು, ಸಮೀಕ್ಷೆಯಲ್ಲಿ ಸುಮಾರು ೬೦ ಪ್ರಶ್ನೆಗಳನ್ನು ಒಳಗೊಂಡಿರುತ್ತದೆ. ಗಣತಿದಾರರು ಮೊಬೈಲ್ ಆಪ್ ಮೂಲಕ ಮನೆ-ಮನೆಗೆ ಭೇಟಿ ನೀಡಿ ಮಾಹಿತಿಯನ್ನು ಸಂಗ್ರಹಿಸುತ್ತಾರೆ. ಸಮೀಕ್ಷೆಯು ಪಡಿತರ ಚೀಟಿ ಮತ್ತು ಆಧಾರ್ ಸಂಖ್ಯೆಯ ಆಧಾರದಲ್ಲಿ ನಡೆಯಲಿದೆ. ಸಾರ್ವಜನಿಕರು ತಮ್ಮ ಮಾಹಿತಿಯನ್ನು ನಿಖರವಾಗಿ

ಒದಗಿಸಬೇಕಾಗುತ್ತದೆ. ಸಮೀಕ್ಷೆಗೆ ೨ ಸಾವಿರದ ೫೨೦  ಗಣತೀದಾರರನ್ನು ನೇಮಿಸಲಾಗಿದೆ ಎಂದು ತಿಳಿಸಿದ್ದಾರೆ.

*****END*****